25-FF of the Industrial Disputes Act, 1947 and that the workmen of the erstwhile management have raised the dispute demanding continuation of their service under the new management and that conciliation proceedings to resolve this dispute are underway.

1320(614) ಶ್ರೀ ಸುರೇಶ ಎಸ್. ಮಾರಿಹಾಳ (ಕಿತ್ತೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕಿತ್ತೂರು ಮತ ಕ್ಷೇತ್ರದಲ್ಲಿರುವ ಗಜಮನಾಳ ಮತ್ತು ಹೊಸಕೋಟೆ ಗ್ರಾಮಗಳಲ್ಲಿರುವ ಆಶ್ರಮ ಶಾಲೆಗಳಿಗೆ (ಎಸ್.ಟಿ) ವಸತಿ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೆಳಗಾವಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಯವರು ವಸತಿ ಸೌಕರ್ಯಕ್ಕಾಗಿ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೇ;

ಇ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ಗಜಮನಾಳ ಮತ್ತು ಹೊಸಕೋಟೆ ಗ್ರಾಮಗಳಲ್ಲಿರುವ ಆಶ್ರಮ ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ. ಸರ್ಕಾರಿ ಆದೇಶ ಸಂಖ್ಯೆ: ಸಕಇ 78 ಪವಯೋ 2006, ದಿನಾಂಕ: 30.03.2006ರಲ್ಲಿ ಗಜಮನಾಳ ಗ್ರಾಮದಲ್ಲಿ ಆಶ್ರಮಶಾಲೆ ಕಟ್ಟಡ ನಿರ್ಮಾಣ ಮಾಡಲು ಕೇಂದ್ರ ಪುರಸ್ಕೃತ ಯೋಜನೆಗಳಡಿ 110.00 ಲಕ್ಷ ರೂ.ಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ಈ ಕಾಮಗಾರಿಯನ್ನು ಅನುಷ್ಟಾನಗೊಳಿಸಲು ಟೆಂಡರ್ ಪ್ರಕ್ರಿಯೆ ನಡೆಸಲಾಗುತ್ತಿದೆ.

ಕೇಂದ್ರ ಪುರಸ್ಕೃತ ಯೋಜನೆಯಡಿ ಹೊಸಕೋಟೆ ಗ್ರಾಮದಲ್ಲಿ ಆಶ್ರಮಶಾಲೆ ನಿರ್ಮಾಣಕ್ಕೆ 2006–07ನೇ ಸಾಲಿನಲ್ಲಿ ಕ್ರಮ ಕೈಗೊಳ್ಳಲಾಗುವುದು.

ಆ) ಹೌದು.

ಇ) 2006–07ನೇ ಸಾಲಿನ ಕೇಂದ್ರ ಸರ್ಕಾರದ ಆಯವ್ಯಯದಲ್ಲಿ ಅನುದಾನ ಒದಗಿಸಿರುವುದರಿಂದ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನ ಪಡೆದು ಕಟ್ಟಡ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೊಳ್ಳಲಾಗುವುದು.

1321(1449) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಿಂದುಳಿದ ಗಡಿ ಪ್ರದೇಶವಾದ ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ರಾಜ್ಯಾದ್ಯಂತ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳೆಷ್ಟು;

ಆ) ವಿದ್ಯಾರ್ಥಿನಿಲಯಗಳ ಕಟ್ಟಡಗಳು ಪೂರ್ಣಗೊಳ್ಳದೆ ಅಪೂರ್ಣವಾಗಿ ಉಳಿದಿರುವವು ಎಷ್ಟು;

ಇ) ಹಾಗಿದ್ದಲ್ಲಿ, ಪೂರ್ಣಗೊಳ್ಳದಿರಲು ಕಾರಣಗಳೇನು,

ಈ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯಲ್ಲಿ ಹೊಸದಾಗಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯವನ್ನು ಸ್ಥಾಪಿಸಲಾಗುವುದೇ;

ಉ) ಇಲ್ಲದಿದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಗಡಿನಾಡು ಜಿಲ್ಲೆ ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿ 1175 ಮೆಟ್ರಿಕ್ ಪೂರ್ವ ಮತ್ತು 265 ಮೆಟ್ರಿಕ್ ನಂತರದ ಬಾಲಕ ಬಾಲಕಿಯರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.

ಆ) ಜಿಲ್ಲಾವಲಯದಲ್ಲಿ ನಿರ್ಮಾಣವಾಗುತ್ತಿರುವ 14 ವಿದ್ಯಾರ್ಥಿನಿಲಯಗಳ ಕಟ್ಟಡಗಳು ವಿವಿಧ ನಿರ್ಮಾಣ ಹಂತದಲ್ಲಿರುತ್ತವೆ. ಇದರಲ್ಲಿ ಕೊಳ್ಳೇಗಾಲ ಟೌನ್ ಮೆಟ್ರಿಕ್ ನಂತರ ಬಾಲಕಿಯರ ಕಟ್ಟಡವು ಸೇರಿರುತ್ತದೆ.

ಇ) ರಾಜ್ಯವಲಯ ಯೋಜನಾ ಕಾರ್ಯಕ್ರಮದಲ್ಲಿ ಇದ್ದ ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣ ಕಾರ್ಯಕ್ರಮವನ್ನು ದಿನಾಂಕ: 1.4.2005 ರಿಂದ ಜಿಲ್ಲಾ ವಲಯಕ್ಕೆ ವರ್ಗಾಯಿಸಿದ್ದು, ಜಿಲ್ಲಾವಲಯದಲ್ಲಿ ಆಯವ್ಯಯದ ಅವಕಾಶ ಮಾಡಿಕೊಂಡು ಕಟ್ಟಡ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

ಈ) 2006–07ನೇ ಸಾಲಿನಲ್ಲಿ 50 ಹಿಂದುಳಿದ ವರ್ಗಗಳ ಹೊಸ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. ಸ್ಥಳ ಆಯ್ಕೆ ಮಾಡಿ ಮಂಜೂರು ಮಾಡುವಾಗ ಚಾಮರಾಜನಗರ ಜಿಲ್ಲೆಯ ಅವಶ್ಯಕತೆಯನ್ನು ಪರಿಶೀಲಿಸಲಾಗುವುದು.

ಉ) ವರ್ಷವಾರು ಆಯವ್ಯಯ ಲಭ್ಯತೆಯ ಆಧರಿಸಿ ಹಂತ ಹಂತವಾಗಿ ವಿದ್ಯಾರ್ಥಿನಿಲಯಗಳನ್ನು ಹೊಸದಾಗಿ ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು.

1323(1694) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಿಂದುಳಿದ ಗಡಿ ಪ್ರದೇಶವಾದ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಆಸ್ಪತ್ರೆಗಳ ಸಂಖ್ಯೆ ಎಷ್ಟು?